ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 69

ಸದಸ್ಯರ ಹೆಸರು : ಶ್ರೀ ವಿಜಯ್ ಸಿಂಗ್

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 21-09-2020

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಬೀದರ್ ಜಿಲ್ಲೆಯಲ್ಲಿ ಮಹಾಮಾರಿ ಕರೋನಾದಿಂದ ಲಾಕ್‌ಡೌನ್ ಮಾಡಿದ ಪರಿಣಾಮವಾಗಿ ಸರ್ಕಾರ, ಆಟೋ ಚಾಲಕರ, ಕಾರ್ಮಿಕರ ಖಾತೆಗಳಿಗೆ ಹಣ ಸಂದಾಯ ಮಾಡಲಾಗುವುದೆಂದು ಘೋಷಿಸಿದ್ದು, ಎಷ್ಟು ಕಾರ್ಮಿಕರು, ಈ ಸೌಲಭ್ಯವನ್ನು ಪಡೆದಿರುತ್ತಾರೆ.	ಕೋವಿಡ್-19 ಲಾಕ್‌ಡೌನ್ ಹಿನ್ನೆಲೆಯಲ್ಲಿ, ರಾಜ್ಯದಲ್ಲಿನ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ತಮ್ಮ ಆದಾಯವನ್ನು ಕಳೆದುಕೊಂಡಿರುವುದರಿಂದ, ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಒಮ್ಮೆ ರೂ.5,000/-ಗಳ ಪರಿಹಾರ ಧನವನ್ನು ಘೋಷಿಸಲಾಗಿದ್ದು, ಈ ಸಂಬಂಧವಾಗಿ ಸೇವಾಸಿಂಧು ವೆಬ್ ಪೋರ್ಟಲ್ ಮೂಲಕ 2,45,844 ಅರ್ಜಿಗಳು ಸ್ವೀಕೃತವಾಗಿದ್ದು, ಇಲ್ಲಿಯವರೆಗೆ 2,15,155 ಫಲಾನುಭವಿಗಳ ಖಾತೆಗೆ ರೂ.5000/-ಗಳಂತೆ ಪರಿಹಾರ ಧನವನ್ನು ಜಮೆ ಮಾಡಲಾಗಿದೆ.
ಆ)	ಇದುವರೆಗೆ ಜಿಲ್ಲೆಯಲ್ಲಿ ಎಷ್ಟು ಕಾರ್ಮಿಕರಿಂದ ಅರ್ಜಿಗಳನ್ನು ಸ್ವೀಕರಿಸಲಾಗಿದೆ: ಸ್ವೀಕರಿಸಿದ ಅರ್ಜಿಗಳಲ್ಲಿ ಎಷ್ಟು ಕಾರ್ಮಿಕರ ಖಾತೆಗಳಿಗೆ ಹಣ ಜಮಾ ಮಾಡಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)	ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ ಪರಿಹಾರ ಕೋರಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳ ಒಟ್ಟು ಸಂಖ್ಯೆ ಹಾಗೂ ಪರಿಹಾರ ಧನವನ್ನು ಖಾತೆಗೆ ಜಮಾ ಮಾಡಲಾದ ಫಲಾನುಭವಿಗಳ ಸಂಖ್ಯೆಯ ತಾಲ್ಲೂಕುವಾರು ಮಾಹಿತಿಯು ಈ ಕೆಳಗಿನಂತಿದೆ.

ಕ್ರ. ಸಂ.	ಬೀದರ್ ಜಿಲ್ಲೆಯ ತಾಲ್ಲೂಕುಗಳು	ಒಟ್ಟು ಅರ್ಜಿ ಸಲ್ಲಿಸಿದ ಫಲಾನುಭವಿಗಳು	ಪರಿಹಾರ ಧನವನ್ನು ಖಾತೆಗೆ ಜಮಾ ಮಾಡಿದ ಫಲಾನುಭವಿಗಳ ಸಂಖ್ಯೆ
1.	ಔರಾದ್	41	35
2.	ಬಸವಕಲ್ಯಾಣ	318	275
3.	ಬಾಲ್ಕಿ	115	95
4.	ಬೀದರ್	985	810
5.	ಚಿತ್ತಗುಪ್ಪ	12	07
6.	ಹುಮ್ನಾಬಾದ್	205	181
7.	ಹುಲಸೂರ್	01	01
	ಒಟ್ಟು	**1677**	**1404**

ಟಿಡಿ 60 ಟಿಡಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು